ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: 25 ವಿಧಾನಸಭೆ - ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 6-3-2021

# ವಿಧಾನಸೌಧ ಕಾಗೇರಿಯದ್ದಾ?: ಶಾಸಕ ಸಂಗಮೇಶ್ ಸಿಡಿಮಿಡಿ

## ಮೊಗಸಾಲೆ ಪ್ರವೇಶಕ್ಕೂ ಬಿಡದ್ದಕ್ಕೆ ಆಕ್ರೋಶ

• ಕನ್ನಡಪ್ರಭ ವಾರ್ತೆ ಬೆಂಗಳೂರು

ವಿಧಾನಸಭೆಯಲ್ಲಿ ಶರ್ಟ್ ಕಳಚಿ ಒಂದು ವಾರದವರೆಗೆ ಅಮಾನತುಗೊಂಡಿರುವ ಭದ್ರಾವತಿ ಶಾಸಕ ಬಿ.ಕೆ. ಸಂಗಮೇಶ್ ವಿಧಾನಸಭೆ ಮೊಗಸಾಲೆಗೂ ಬಿಡದ ಮಾರ್ಷಲ್‌ಗಳು ಹಾಗೂ ವಿಧಾನಸಭೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ವಿರುದ್ಧ ಶುಕ್ರವಾರ ಆಕ್ರೋಶ ವ್ಯಕ್ತಪಡಿಸಿದ್ದಾರೆ.



'ಅಮಾನತು ಮಾಡಿರುವುದರಿಂದ ಸದನದ ಒಳಗೆ ಬೇಡ ಕನಿಷ್ಠ ಮೊಗಸಾಲೆಗೂ ಬಿಡುತ್ತಿಲ್ಲ. ಸ್ಪೀಕರ್ ಪಕ್ಷಪಾತ ಮಾಡುತ್ತಿದ್ದಾರೆ. ವಿಧಾನಸೌಧವೇನು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರದ್ದಾ? ವಿಧಾನಸೌಧ ಜನರಿಗೆ ಸೇರಿರುವುದು ಎಂಬುದು ನೆನಪಿರಲಿ' ಎಂದು ಕಿಡಿ ಕಾರಿದರು.

ವಿಧಾನಸೌಧದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಸ್ಪೀಕರ್ ಸರ್ವಾಧಿಕಾರಿ ಧೋರಣೆ ತೋರುತ್ತಿದ್ದಾರೆ. ಕ್ಷೇತ್ರದಲ್ಲಿ ನನಗೆ ಅನ್ಯಾಯವಾಗಿದೆ. ನನ್ನ ಕುಟುಂಬದ ಮೇಲೆ ಕುತಂತ್ರದಿಂದ ಪ್ರಕರಣ ದಾಖಲಿಸಿದ್ದಾರೆ. ನನಗೆ ಆಗಿರುವ ಅನ್ಯಾಯವನ್ನು ಪ್ರಸ್ತಾಪಿಸಲು ಸದನದ ಗಮನ ಸೆಳೆಯಲು ಶರ್ಟ್ ಬಿಚ್ಚಿದ್ದೆ. ನಾನು ಸ್ಪೀಕರ್ ಪೀಠಕ್ಕೆ ಅಗೌರವ ತೋರಿಲ್ಲ. ತಾಕತ್ತಿದ್ದರೆ ನನ್ನನ್ನು ಬಂಧಿಸಲಿ' ಎಂದು ಸವಾಲೆಸೆದರು.